ಕೈಮಗ್ಗ ಅಭಿವೃದ್ಧಿ ನಿಗಮದ ಕೇಂದ್ರ ಕಛೇರಿಯನ್ನು ಧಾರವಾಡಕ್ಕೆ ಸ್ಥಳಾಂತರಿಸುವುದು.

803-ಶ್ರೀ ಗುರುಪಾದಪ್ಪ ನಾಗಪುರಪಲ್ಲಿ (ಔರಾದ್) : ಮಾನ್ಯ ಸಕ್ಕರೆ, ಜವಳಿ, ವಿಜ್ಞಾನ, ಪರಿಸರ ಮಾಲಿನ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕರ್ನಾಟಕದ ಅವಳಿ ನಗರಗಳಾದ ಹುಬ್ಬಳ್ಳಿ-ಧಾರವಾಡ ಜವಳಿ ಉದ್ಯಮಗಳು ದಿನೇ ದಿನೇ ವೃದ್ಧಿಯಾಗುತ್ತಿರುವುದರಿಂದ ಬೆಂಗಳೂರಿನಲ್ಲಿರುವ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಕೇಂದ್ರ ಕಛೇರಿಯನ್ನು ಧಾರವಾಡಕ್ಕೆ ಸ್ಥಳಾಂತರಿಸುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಆ) ಈ ಮೊದಲು ನಿಗಮದ ಕೇಂದ್ರ ಕಛೇರಿಯನ್ನು ಬಿಜಾಪುರಕ್ಕೆ ಸ್ಥಳಾಂತಾರಿಸುವವಿಷಯವು ಸರ್ಕಾರದ ಪರಿಶೀಲನೆಯಲ್ಲಿತ್ತೆ?

ಇ) ಹಾಗಿದ್ದಲ್ಲಿ ನಿಗಮದ ಕೇಂದ್ರ ಕಛೇರಿಯನ್ನು ಮೇಲ್ಕಂಡ ಎರಡು ಸ್ಥಳಗಳಲ್ಲಿಯ ಯಾವ ಸ್ಥಳಕ್ಕೆ ಸ್ಥಳಾಂತರಿಸಲಾಗುವುದು?

ಶ್ರೀ ಪಿ.ಸಿ. ಸಿದ್ದನಗೌಡರ್ (ಸಕ್ಕರೆ, ಜವಳಿ, ವಿಜ್ಞಾನ ಮತ್ತು ತಂತ್ರಜ್ಞಾನ ಜೀವಿಶಾಸ್ತ್ರ ಮತ್ತು ಪರಿಸರ ರಾಜ್ಯ ಸಚಿವರು).

ಅ) ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಕೇಂದ್ರ ಕಛೇರಿಯನ್ನು ಹುಬ್ಬಳ್ಳಿಗೆ ಸ್ಥಳಾಂತರಿಸುವ ಪ್ರಸ್ತಾಪನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಇಲ್ಲ

ಇ) ದಲ್ಲಿ ನೀಡಿದ ಕಾರಣದಿಂದ ಇದು ಉದ್ಭವಿಸುವುದಿಲ್ಲ.

ತಿಪ್ಪೆಗೊಂಡನಹಳ್ಳಿ ಜವಳಿ ಗಿರಣಿ ಸ್ಥಾಪನೆಗೆ

797-ಶ್ರೀ ಗುರುಪಾದಪ್ಪ ನಾಗಮಾರಪಳ್ಳಿ, (ಔರಾದ್) ಮಾನ್ಯ ಸಕ್ಕರೆ,ಜವಳಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಪರಿಸರ ಮತ್ತು ಜೀವಿಶಾಸ್ತ್ರ ರಾಜ್ಯ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿಗೆ ನೀರು ಪೂರೈಕೆ ಮೂಲವಾಗಿರುವ ತಿಪ್ಪಗೊಂಡನಹಳ್ಳಿ ಪ್ರದೇಶದಲ್ಲಿ ಜವಳಿ ಗಿರಣಿ ಸ್ಥಾಪನೆಯ ಸಲುವಾಗಿ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಎಲ್ಲ ರೀತಿ ನೀತಿಗಳನ್ನು ಗಾಳಿಗೆ ತೂರಿ ಅನುಮತಿ ನೀಡಿರುವುದು ನಿಜವೆ?

ಆ) ಪರಿಸರ ಇಲಾಖೆಯ ಗಮನಕ್ಕೂ ತಾರದೇ ಮಾಲಿನ್ಯ ನಿಯಂತ್ರಣ ಮಂಡಳಿಯು ತರಾತುರಿಯಲ್ಲಿ ಜವಳಿ ಗಿರಣಿ ಸ್ಥಾಪನೆಗೆ ಅನುಮತಿ ನೀಡಿರುವುದರ ಹಿನ್ನಲೆಯೇನು?

ಇ) ಸಾರ್ವಜನಿಕ ಹಿತದೃಷ್ಟಿಯಿಂದ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯವರು ಜವಳಿ ಗಿರಣಿ ಸ್ಥಾಪನೆಗೆ ನೀಡಿರುವ ಅನುಮತಿಯನ್ನು ರದ್ದುಪಡಿಸಿ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷರು ಈ ವಿಷಯಕ್ಕೆ ಜವಾಬ್ದಾರರೇ ಹಾಗಿದ್ದಲ್ಲಿ ಈ ವಿಷಯದಲ್ಲಿ ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?